ಅ. ಉತ್ತರ ಕನ್ನಡ ಜಿಲ್ಲೆ ಅಂಕೋಲದಲ್ಲಿ ಮಂಜೂರಾದ ಕೆ. ಎಸ್.ಆರ್.ಟಿ.ಸಿ ಬಸ್ ಡಿಪೋ ಕಾಮಗಾರಿಗೆ ಬಿಡುಗಡೆಗೊಂಡ ಅನುದಾನವೆಷ್ಟು.

ಆ. ಕಾಮಗಾರಿ ಕಳಪೆ ಹಾಗೂ ನಿಧಾನಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ:

ಇ. ಹಾಗಿದ್ದಲ್ಲಿ ಈ ಬಗ್ಗೆ ಕೈಗೊಳ್ಳಲಿರುವ ಕ್ರಮವೇನು?

ಶ್ರೀ ಬಿ. ರಮಾನಾಥ್ ರೈ (ಸಾರಿಗೆ ಸಚಿವರು)

ಅ. ಅಂಕೋಲ ಬಸ್ ಡಿಪೋ ನಿರ್ಮಾಣಕ್ಕಾಗಿ ರೂಪಾಯಿ 70 ಲಕ್ಷಗಳ ಅಂದಾಜು ಪಟ್ಟಿಗೆ ಮಂಜೂರಾತಿ ನೀಡಲಾಗಿದೆ. ಸದರಿ ಕಾಮಗಾರಿಗೆ ಇದುವರೆವಿಗೂ ರೂಪಾಯಿ 15.08 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.

ಆ. ಇಲ್ಲ

ಇ. ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಸ್ವಯಂ ಘೋಷಿತ ಆಸ್ತಿತೆರಿಗೆ

197(405) ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಅಂಕೋಲ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ರಾಜ್ಯದಲ್ಲಿ ಸ್ವಯಂಘೋಷಿತ ಆಸ್ತಿ ತೆರಿಗೆ ಜನರಿಗೆ ತೀವ್ರ ಹೊರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಮನೆ ಹಾಗೂ ಭೂಮಿ ಅಂದಾಜು ಮೌಲ್ಯ ತೀರಾ ಅವೈಜ್ಞಾನಿಕವಾಗಿರುವುದು ತಮ್ಮ ಗಮನಕ್ಕೆ ಬಂದಿದೆಯೆ?

ಇ. ಇಲ್ಲಿಯ ಸ್ಥಳೀಯ ಸಂಸ್ಥೆಗಳು, ಖಾಲಿ ಜಾಗ, ಕಾಂಪೌಡು, ಬಾವಿ ಕರೆಂಟು ಇದರ ಮೇಲೂ ತೆರಿಗೆ ವಿಧಿಸುತ್ತಿರುವುದಕ್ಕೆ ಕಾರಣವೇನು?

ಈ. ಸರ್ಕಾರ ಇದರ ಬಗ್ಗೆ ಕೂಡಲೇ ಕ್ರಮ ತೆಗೆದುಕೊಂಡು ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುತ್ತದೆಯೇ?

ಶ್ರೀ ಡಿ.ಕೆ.ಶಿವಕುಮಾರ್ (ನಗರಾಭಿವೃದ್ಧಿ ಸಚಿವರು)

ಅ. ಇಲ್ಲ

ಆ. ಇಲ್ಲ ಖಾಲಿ ನಿವೇಶನಗಳಿಗೆ ಸಂಬಂಧಿಸಿದಂತೆ ಶೇ. 03ರಿಂದ ಶೇ. 0.6 ರವರೆಗೆ ಆಸ್ತಿ ತೆರಿಗೆಗಳನ್ನು ನಿಗದಿಪಡಿಸಿದ್ದು ಈ ಬಗ್ಗೆ ಬಂದಿರುವ ವಿರೋಧವನ್ನು ಪರಿಗಣಿಸಿ ಖಾಲಿ ನಿವೇಶನಗಳಿಗೆ ತೆರಿಗೆಯನ್ನು ಕಡಿಮೆಗೊಳಿಸಲು ನಿಯಮಗಳಿಗೆ ಸೂಕ್ತ ತಿದ್ದುಪಡಿಗಳನ್ನು ತರಲು ಕ್ರಮ ಜರುಗಿಸಲಾಗುತ್ತಿದೆ.

ಇ. ಖಾಲಿ ಜಾಗಕ್ಕೆ ಮಾತ್ರ ವೈಜ್ಞಾನಿಕ ರೀತಿಯಲ್ಲಿ ತೆರಿಗೆಯನ್ನು ನಿಗಧಿ ಪಡಿಸಿದೆ.

ಈ. ಹೌದು

ಮಂಗಳೂರು ಕಾರಾಗೃಹ ಅಭಿವೃದ್ಧಿ

19(470) ಶ್ರೀ ಯೋಗೀಶ್ ಭಟ್. ಎಸ್(ಮಂಗಳೂರು) : ಮಾನ್ಯ ಬಂದೀಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?